**Akashvani: Bangalore**
**Regional Bulletin In Kannada**
**05.02.2026 : 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**05.02.2026 : 14.30hrs**

*********

**ಮುಖ್ಯಾಂಶಗಳು :**

1. ಪರಿಸರ, ಕಾನೂನು ಇಲಾಖೆ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಪೂರ್ವಭಾವಿ ಸಭೆ
2. ಮೆಟ್ರೋ ರೈಲು ದರ ಶೇಕಡ ೫ರಷ್ಟು ಹೆಚ್ಚಳ ಮಾಡಿದ ಬಿಎಂಆರ್‌ಸಿಎಲ್; ಸೋಮವಾರದಿಂದ ನೂತನ ದರ ಜಾರಿ
3. ಬೆಂಗಳೂರು-ಪುಣೆ ಹೈಸ್ಪೀಡ್ ರೈಲು ಕಾರಿಡಾರ್ ಯೋಜನೆ; ಕೇಂದ್ರ ಸಚಿವರ ಸ್ಪಂದನೆ ಸ್ವಾಗತಾರ್ಹ - ಸಚಿವ ಎಂ.ಬಿ. ಪಾಟೀಲ್
4. ಇಂದಿನಿಂದ ಭಾರತ್ ಟ್ಯಾಕ್ಸಿ ಸೇವೆಗೆ ಅಧಿಕೃತ ಚಾಲನೆ
5. ಡಬ್ಲ್ಯೂಪಿಎಲ್ ಕ್ರಿಕೆಟ್ ಪಂದ್ಯಾವಳಿ; ವಡೋದರದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು - ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ

*************

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಬಜೆಟ್ ಪೂರ್ವಬಾವಿ ಸಭೆ ನಡೆಸುತಿದ್ದಾರೆ. ಮೊದಲಿಗೆ ಅರಣ್ಯ ಇಲಾಖೆ ಹಾಗೂ ಪರಿಸರ ಇಲಾಖೆ ಅಧಿಕಾರಿಗಳೊಂದಿಗೆ ಇಂದು ವಿಧಾನಸೌಧದಲ್ಲಿ ಸಭೆ ನಡೆಸಿದರು. ಸಭೆಯಲ್ಲಿ ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ, ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕಾನೂನು ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ್ ಹಾಗೂ ಆ ಇಲಾಖೆಯಲ್ಲಿನ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

*************

ಮೆಟ್ರೋ ರೈಲು ನಿಗಮ ನಿಯಮಿತ - ಬಿಎಂಆರ್‌ಸಿಎಲ್ ಮತ್ತೆ ನಮ್ಮ ಮೆಟ್ರೋ ಪ್ರಯಾಣ ದರವನ್ನು ಶೇಕಡ ೫ರಷ್ಟು ಹೆಚ್ಚಳ ಮಾಡಿದೆ. ಇದೇ ೯ರ ಸೋಮವಾರ ಹೊಸ ದರ ಜಾರಿಗೆ ಬರಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ದರವು ಕನಿಷ್ಠ ಒಂದು ರೂಪಾಯಿ ಹಾಗೂ ಗರಿಷ್ಠ ೫ ರೂಪಾಯಿಯಷ್ಟು ಹೆಚ್ಚಳವಾಗಿದೆ. ಕನಿಷ್ಠ ೧೦ ಇರುವ ದರ ೧೧ ರೂಪಾಯಿಗೆ, ಗರಿಷ್ಠ ೯೦ ಇರುವ ದರ ೯೫ಕ್ಕೆ ಏರಿಕೆಯಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ಒಂದು ದಿನದ ಪಾಸ್ ದರ ಪ್ರಸ್ತುತ ೩೦೦ ರೂಪಾಯಿ ಇದ್ದದ್ದು, ೩೧೩ಕ್ಕೆ ಏರಿಕೆಯಾಗಿದೆ. ಮೂರು ದಿನಗಳ ಪಾಸ್ ೬೦೦ ರೂಪಾಯಿಂದ ೬೨೮ ಹಾಗೂ ಐದು ದಿನಗಳ ಪಾಸ್ ೯೦೦ ರಿಂದ ೯೪೩ಕ್ಕೆ ಏರಿಕೆ ಮಾಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

*************

ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ ಹಾಗೂ ಎಚ್.ಡಿ. ಕುಮಾರಸ್ವಾಮಿ ಅವರು ಬೆಂಗಳೂರು-ಪುಣೆ- ಮುಂಬೈ ನಡುವೆ ಹೈಸ್ಪೀಡ್ ರೈಲು ಕಾರಿಡಾರ್ ಬಗ್ಗೆ ರೈಲ್ವೆ ಸಚಿವ ಅಶ್ವಿನ್ ವೈಷ್ಣವ್ ಅವರೊಂದಿಗೆ ಚರ್ಚಿಸಿರುವುದಕ್ಕೆ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಧನ್ಯವಾದ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಕೇವಲ ಭೇಟಿಗೆ ಮಾತ್ರ ನಿಲ್ಲದೆ, ತಾರ್ಕಿಕ ಅಂತ್ಯ ಕಾಣುವಂತೆ ಮಾಡಬೇಕು ಎಂದು ಮನವಿ ಮಾಡಿದ್ದಾರೆ. ದೇಶದ ತಂತ್ರಜ್ಞಾನ ರಾಜಧಾನಿ ಬೆಂಗಳೂರು ಮತ್ತು ಆರ್ಥಿಕ ರಾಜಧಾನಿ ಮುಂಬಯಿ ನಡುವೆ ಅತ್ಯುತ್ತಮ ಸಂಪರ್ಕ ವ್ಯವಸ್ಥೆ ಬರಬೇಕು. ಇದರಿಂದ ಮಧ್ಯ ಮತ್ತು ಉತ್ತರ ಕರ್ನಾಟಕ ಹಾಗೂ ಪಶ್ಚಿಮ ಮಹಾರಾಷ್ಟ್ರದ ಭಾಗಗಳಿಗೆ ಅಪಾರ ಲಾಭವಿದೆ ಎಂದು ಪ್ರತಿಪಾದಿಸಿದ್ದಾರೆ. ಬೆಂಗಳೂರು-ಪುಣೆ-ಮುಂಬೈ ಮಧ್ಯೆ ಈ ಯೋಜನೆ ಜಾರಿಗೆ ಬಂದರೆ ತುಮಕೂರು, ದಾವಣಗೆರೆ, ಹುಬ್ಬಳ್ಳಿ, ಬೆಳಗಾವಿ, ಸಾಂಗ್ಲಿ, ಕೊಲ್ಲಾಪುರ ಹೀಗೆ ಹಲವು ಪ್ರದೇಶಗಳಿಗೆ ಪ್ರಯೋಜನವಾಗಿ, ಆರ್ಥಿಕ ಮತ್ತು ಕೈಗಾರಿಕಾ ಪ್ರಗತಿ ಸಾಧ್ಯವಾಗಲಿದೆ ಎಂದು ಹೇಳಿದ್ದಾರೆ.

*************

ಸಹಕಾರಿ ತತ್ವದಲ್ಲಿ ರೂಪುಗೊಂಡಿರುವ ಕ್ಯಾಬ್ ಸರ್ವೀಸ್ ಕಂಪನಿಯಾದ ಭಾರತ್ ಟ್ಯಾಕ್ಸಿಯ ಸೇವೆಗೆ ಇಂದು ಅಧಿಕೃತವಾಗಿ ಚಾಲನೆ ದೊರೆಯಲಿದೆ. ಇಂದು ಗೃಹ ಸಚಿವ ಅಮಿತ್ ಶಾ ಭಾರತ್ ಟ್ಯಾಕ್ಸಿ ಸರ್ವೀಸ್‌ಗೆ ಚಾಲನೆ  ನೀಡಲಿದ್ದಾರೆ. ಅಮುಲ್ ಸೇರಿದಂತೆ ವಿವಿಧ ಸರ್ಕಾರಿ ಸಂಸ್ಥೆಗಳಿಂದ ಬೆಂಬಲಿತವಾಗಿರುವ ಈ ಕ್ಯಾಬ್ ಸರ್ವೀಸ್ ಸದ್ಯ ದೆಹಲಿ ಎನ್‌ಸಿಆರ್ ಪ್ರದೇಶ ಅಧಿಕೃತವಾಗಿ ಶುರುವಾಗಲಿದೆ. ಈ ಮೂಲಕ ಕ್ಯಾಬ್ ಸರ್ವೀಸ್ ಕ್ಷೇತ್ರದಲ್ಲಿ ಓಲಾ, ಊಬರ್ ಪ್ರಾಬಲ್ಯಕ್ಕೆ ಸೆಡ್ಡು ಹೊಡೆಯಲು ಭಾರತ್ ಟ್ಯಾಕ್ಸಿ ರಸ್ತೆಗಿಳಿಯಲಿದೆ.  ಈ ಸಹಕಾರಿ ಸಂಸ್ಥೆಯು ಲಾಭದ ಉದ್ದೇಶ ಹೊಂದಿಲ್ಲ ಎನ್ನುವುದು ಗಮನಾರ್ಹ, ಭಾರತ್ ಟ್ಯಾಕ್ಸಿಯಲ್ಲಿ ಡ್ರೈವರ್‌ಗಳೇ ಮಾಲೀಕರಾಗಿದ್ದು, ಪ್ಲಾಟ್‌ಫಾರ್ಮ್ ಶುಲ್ಕ ತೆರಬೇಕಿಲ್ಲ. ಓಲಾ, ಊಬರ್‌ಗಳು ಚಾಲಕರಿಂದ ಶೇಕಡ ೩೦-೪೦ರಷ್ಟು ಕಮಿಷನ್ ಪಡೆಯುತ್ತವೆ. ಭಾರತ್ ಟ್ಯಾಕ್ಸಿಯಲ್ಲಿ ಈ ಶುಲ್ಕ ಇರುವುದಿಲ್ಲ. ಹೀಗಾಗಿ ಕ್ಯಾಬ್ ಚಾಲಕರಿಗೆ ಹೆಚ್ಚಿನ ಆದಾಯ ಸಿಗಲಿದೆ. ಗ್ರಾಹಕರಿಗೆ ಟ್ಯಾಕ್ಸಿ ದರ ಕಡಿಮೆಯಾಗಿರಲಿದೆ. ಮುಂಬರುವ ದಿನಗಳಲ್ಲಿ  ದೇಶಾದ್ಯಂತ ಎಲ್ಲಾ ನಗರಗಳಲ್ಲಿ ಇದರ ಸೇವೆ ವಿಸ್ತರಿಸುವ ಉದ್ದೇಶ ಹೊಂದಲಾಗಿದೆ.

*************

ಸಾರ್ವಜನಿಕ ವಲಯದ ಉತ್ಪಾದನಾ ಕೇಂದ್ರ ಎಚ್‌ಎಎಲ್ ಭಾರತೀಯ ವಾಯುಪಡೆಗೆ ಲಘು ಯುದ್ಧ ವಿಮಾನ ತೇಜಸ್ ಮಾರ್ಕ್ ೧ಎ ವಿತರಣೆಯ ಕುರಿತು ಸ್ಪಷ್ಟೀಕರಣ ನೀಡಿದೆ.  ಇಂದು ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ಐದು ಲಘು ಯುದ್ಧ ವಿಮಾನ ಮಾರ್ಕ್ ೧ಎ ವಿಮಾನಗಳು ವಿತರಣೆಗೆ ಸಂಪೂರ್ಣವಾಗಿ ಸಿದ್ಧವಾಗಿವೆ ಎಂದು ದೃಢಪಡಿಸಿದೆ. ಹೆಚ್ಚುವರಿಯಾಗಿ ಒಂಬತ್ತು ವಿಮಾನಗಳನ್ನು ಈಗಾಗಲೇ ನಿರ್ಮಿಸಲಾಗಿದೆ. ಎಚ್‌ಎಎಲ್ ಅಮೆರಿಕ ಜಿಇ ಎಂಜಿನ್‌ಗಳಿಗಾಗಿ ಕಾಯುತ್ತಿದೆ ಹಾಗೂ  ಈ ಎಂಜಿನ್‌ಗಳ ಸ್ವೀಕೃತಿಯ ನಂತರ ವಿಮಾನಗಳು ವಿತರಣೆಗೆ ಸಿದ್ಧವಾಗಲಿದೆ ಎಂದು ಹೇಳಿದೆ. ಅಮೆರಿಕ ಕಂಪನಿ ಜಿಇ ಎಫ್ ೪೦೪ ಜೆಟ್ ಎಂಜಿನ್‌ಗಳ ವಿತರಣೆಯಲ್ಲಿನ ವಿಳಂಬವು ತೇಜಸ್ ಯುದ್ಧ ವಿಮಾನಗಳ ವಿತರಣೆಯ ವಿಳಂಬಕ್ಕೆ ಕಾರಣವಾಗಿದೆ. ಆದಾಗ್ಯೂ ಪ್ರಸ್ತುತ ಹಣಕಾಸು ವರ್ಷಕ್ಕೆ ಯೋಜಿಸಲಾದ ಮಾರ್ಗದರ್ಶನವನ್ನು ಎಚ್‌ಎಎಲ್ ಪೂರೈಸಲಿದೆ ಎಂದು ತಿಳಿಸಿದೆ.

*************

ಗದಗ ಜಿಲ್ಲೆ ರೋಣ ತಾಲೂಕಿನ ಜಿಗಳೂರು ಗ್ರಾಮದ ಬಳಿ ಕ್ಯಾಂಟರ್ ಮತ್ತು ಟೆಂಪೋ ಟ್ರ್ಯಾಕ್ಸ್ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿದ ಪರಿಣಾಮವಾಗಿ ಮೂವರು ಮಹಿಳೆಯರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅಪಘಾತದಲ್ಲಿ ಗಾಯಗೊಂಡ ಹತ್ತು ಜನರನ್ನು ರೋಣ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಗಜೇಂದ್ರಗಡದಿಂದ ರೋಣಕ್ಕೆ ಹೊರಟಿದ್ದ ಟೆಂಪೋ ಟ್ರ್ಯಾಕ್ಸ್, ರೋಣದಿಂದ ಗಜೇಂದ್ರಗಡ ಕಡಗೆ ಹೊರಟಿದ್ದ ಕ್ಯಾಂಟರ್ ಮಧ್ಯೆ ಡಿಕ್ಕಿ ಯಾಗಿದೆ. ರೋಣ ಪೋಲೀಸ್ ಠಾಣೆಯ ಹಿರಿಯ ಅಧಿಕಾರಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

*************

ಯಾದಗಿರಿ ಜಿಲ್ಲೆಯ ೧೧೭ ಗ್ರಾಮ ಪಂಚಾಯಿತಿಗಳ ಸದಸ್ಯರ ಅಧಿಕಾರ ಅವಧಿ ಫೆಬ್ರುವರಿ ೪ರಂದು ಮುಕ್ತಾಯಗೊಂಡ ಹಿನ್ನೆಲೆಯಲ್ಲಿ, ಆ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಿ ಜಿಲ್ಲಾಡಳಿತ ಅಧಿಸೂಚನೆ ಹೊರಡಿಸಿದೆ. ಯಾದಗಿರಿ, ಶಹಾಪುರ, ಸುರಪುರ, ಹುಣಸಗಿ, ಗುರುಮಠಕಲ್ ಹಾಗೂ ವಡಗೇರಾ ತಾಲ್ಲೂಕುಗಳ ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಆಡಳಿತಾಧಿಕಾರಿ ನೇಮಕಗೊಂಡ ಗ್ರಾಮ ಪಂಚಾಯಿತಿಗಳ ಪಟ್ಟಿ ಹಾಗೂ ಸಂಬಂಧಿಸಿದ ಆದೇಶವನ್ನು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಬಿಡುಗಡೆ ಮಾಡಿದ್ದಾರೆ. ಸರ್ಕಾರದ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಆಡಳಿತಾಧಿಕಾರಿಗಳಾಗಿ ನೇಮಿಸಲಾಗಿದ್ದು, ಕೆಲ ಅಧಿಕಾರಿಗಳಿಗೆ ಒಂದಕ್ಕಿಂತ ಹೆಚ್ಚು ಗ್ರಾಮ ಪಂಚಾಯಿತಿಗಳ ಜವಾಬ್ದಾರಿ ನೀಡಲಾಗಿದೆ. ಈ ನಡುವೆ ದೋರನಹಳ್ಳಿ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ ಏರಿಸಿ ಅಧಿಸೂಚನೆ ಹೊರಡಿಸಲಾಗಿದೆ. ಆಡಳಿತಾಧಿಕಾರಿಗಳು ಗ್ರಾಮ ಪಂಚಾಯಿತಿಯ ಎಲ್ಲಾ ಅಧಿಕಾರ ಹಾಗೂ ಕರ್ತವ್ಯಗಳನ್ನು ನಿರ್ವಹಿಸಬೇಕು. ಹಣಕಾಸು ವ್ಯವಹಾರಗಳನ್ನು ಪಂಚಾಯತ್ ಅಭಿವೃದ್ಧಿ ಅಧಿಕಾರಿಯೊಂದಿಗೆ ಜಂಟಿಯಾಗಿ ನಡೆಸಬೇಕು ಎಂದು ಜಿಲ್ಲಾಧಿಕಾರಿ ಆದೇಶದಲ್ಲಿ ತಿಳಿಸಿದ್ದಾರೆ.

*************

ಹಾವೇರಿ ಜಿಲ್ಲೆ  ಹಾನಗಲ್ ತಾಲೂಕಿನ ೭೦ ವರ್ಷಗಳ ೪೨ ಲಕ್ಷ ಪುಟಗಳ ಕಂದಾಯ ದಾಖಲೆ ಡಿಜಿಟಲೀಕರಣವನ್ನು ಪೂರ್ಣಗೊಳಿಸಲಾಗಿದೆ. ವಿಳಂಬಕ್ಕೆ ಅವಕಾಶವಿಲ್ಲದೆ ಕಂದಾಯ ದಾಖಲೆಗಳು ಸಾರ್ವಜನಿಕರು ಪಡೆದುಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಎಲ್ಲ ದಾಖಲೆಗಳು ಈಗ ಆನ್‌ಲೈನ್‌ನಲ್ಲಿಯೂ ಲಭ್ಯವಿವೆ. ಡಿಜಟಲೀಕರಣಗೊಂಡ ಒಂದು ಪುಟದ ಮಾಹಿತಿ ಪಡೆಯಲು ೧೦ ರೂಪಾಯಿ ಪಾವತಿಸಬೇಕು. ಈಗಾಗಲೇ ೬೦ ಸಾವಿರ ಪುಟಗಳನ್ನು ಸಾರ್ವಜನಿಕರು ಡಿಜಿಟಲೀಕರಣಗೊಂಡ ದಾಖಲೆಯಿಂದ ಪಡೆದಿದ್ದಾರೆ. ಕೈ ಬರಹದ ಪಹಣಿಗಳು, ಮ್ಯುಟೇಶನ್ ದಾಖಲೆಗಳು, ಖಾತಾ ಬದಲಾವಣೆ ಮೂಲ ವರದಿ ಕಡತಗಳು, ನ್ಯಾಯಾಲಯ ಪ್ರಕರಣಗಳು, ಭೂ ನ್ಯಾಯ ಮಂಡಳಿ ಆದೇಶಗಳು ಸೇರಿದಂತೆ ಕಂದಾಯ ದಾಖಲೆಗೆ ಸಂಬಂಧಿಸಿದ ಕೈ ಬರಹದಲ್ಲಿದ್ದ ಎಲ್ಲಾ ದಾಖಲೆಗಳನ್ನು ಈಗ ಸಾಫ್ಟ್ ತಂತ್ರಾಶದಲ್ಲಿ ನೀಡುವ ವ್ಯವಸ್ಥೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

*************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪಾಲನಜೋಗಹಳ್ಳಿಯಲ್ಲಿ ಆಟವಾಡುತ್ತಿದ್ದ ಬಾಲಕನ ಮೇಲೆ ಬೀದಿ ನಾಯಿಗಳು ದಾಳಿ ಮಾಡಿ ಗಾಯಗೊಳಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ, ಸ್ಥಳೀಯರು ಮಾಹಿತಿ ನೀಡಿದ್ದರೂ ಇಲಾಖೆಗಳು ಕ್ರಮವಹಿಸದಿರುವ ಬಗ್ಗೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಗಂಭೀರವಾಗಿ ಪರಿಗಣಿಸಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಬೀದಿ ನಾಯಿ ಹಾವಳಿಗೆ ಸಂಬಂಧಿಸಿದಂತೆ ಜಿಲ್ಲಾಡಳಿತವು ಕೂಡಲೇ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳೊಂದಿಗೆ ತುರ್ತು ಸಭೆ ನಡೆಸಬೇಕು.  ಜಿಲ್ಲೆಯಾದ್ಯಂತ ಬೀದಿ ನಾಯಿ ಹಾವಳಿ ನಿಯಂತ್ರಿಸುವಲ್ಲಿ ತುರ್ತು ಕ್ರಮ ಕೈಗೊಂಡು, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗಕ್ಕೆ ವರದಿ ಸಲ್ಲಿಸುವಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಎಸ್. ಕೋಸಂಬೆ ಸೂಚನೆ ನೀಡಿದ್ದಾರೆ.

*************

ಮಹಿಳೆಯರ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಯ ಫೈನಲ್‌ನಲ್ಲಿಂದು ಡೆಲ್ಲಿ ಕ್ಯಾಪಿಟಲ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿವೆ. ವಡೋದರದ

ಬಿಸಿಎ ಕ್ರೀಡಾಂಗಣದಲ್ಲಿ ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ೨ನೇ ಬಾರಿ ಫೈನಲ್‌ಗೇರಿದ್ದು, ಡಬ್ಲ್ಯೂಪಿಎಲ್ ಪ್ರಶಸ್ತಿ ಗೆಲ್ಲುವ ಸಾಧ್ಯತೆಗಳಿವೆ. ಅದೇ ರೀತಿ ೩ನೇ ಬಾರಿ ಫೈನಲ್‌ಗೇರಿರುವ ಡೆಲ್ಲಿ ಕ್ಯಾಪಿಟಲ್ಸ್ ಕೂಡ ಪ್ರಶಸ್ತಿ ಗೆಲ್ಲುವ ಮೆಚ್ಚಿನ ತಂಡಗಳಲ್ಲಿ ಒಂದಾಗಿದೆ.

*******END******